**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ ಮಳವಳ್ಳಿ**

**ಸಿ.ಸಿ ನಂ. 1589/2017**

ಪ್ರಾಸಾ – 5 ಚಾಸಾ – 6

ಸಾಕ್ಷಿಯನ್ನು ದಿಃ 17.03.2026 ರಂದು ಕರೆಸಿ ಪ್ರಮಾಣ ಮಾಡಿಸಲಾಯಿತು

| | |
|---|---|
| ಸಾಕ್ಷಿದಾರರ ಹೆಸರು | ಹೆಚ್ ಜಿ ಬಸವರಾಜು |
| ತಂದೆಯ / ಗಂಡನ ಹೆಸರು | ಲೇಟ್ ಗುರುಮಲ್ಲಪ್ಪ |
| ವಯಸ್ಸು | 68 ವರ್ಷ |
| ಉದ್ಯೋಗ | ನಿವೃತ್ತ ಎ.ಎಸ್.ಐ |
| ವಾಸ | ಮಳವಳ್ಳಿ |

**ಮುಖ್ಯ ವಿಚಾರಣೆ: ಮಾನ್ಯ ಸ.ಸ.ಅ ರವರಿಂದ**

**1.** ನಾನು ದಿನಾಂಕ 26.03.2015 ರಿಂದ 31.07.2018 ರವರೆಗೆ ಹಲಗೂರು ಪೊಲೀಸ್ ಠಾಣೆಯಲ್ಲಿ ಸಹಾಯಕ ಆರಕ್ಷಕ ಉಪ–ನಿರೀಕ್ಷಕರಾಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

**2.** ದಿನಾಂಕ 18.01.2017 ರಂದು ನಾನು ಠಾಣಾ ಪ್ರಭಾರದಲ್ಲಿದ್ದಾಗ ಚಾಸಾ.1ರವರು ಠಾಣೆಗೆ ಹಾಜರಾಗಿ ನೀಡಿದ ವರದಿಯನ್ನು, ಮಹಜರು, ಮುದ್ದೆ ಮಾಲುಗಳು ಹಾಗೂ ಆರೋಪಿಯನ್ನು ಸ್ವೀಕರಿಸಿ ಠಾಣಾ ಮೊಕದ್ದಮೆ ಸಂಃ 23/2017 ಕಲಂ 32 ಮತ್ತು 34 ಕೆ.ಇ ಆಕ್ಟ್ ರೀತ್ಯಾ ಪ್ರಕರಣ ದಾಖಲಿಸಿ ಪ್ರಥಮ ವರ್ತಮಾನ ವರದಿಯನ್ನು ನ್ಯಾಯಾಲಯಕ್ಕೆ ಹಾಗೂ ಮೇಲಾಧಿಕಾರಿಗಳಿಗೆ ನಿವೇದಿಸಿಕೊಂಡಿರುತ್ತೇನೆ. ಸದರಿ ವರದಿಯನ್ನು ಈಗ ನೋಡುತ್ತಿದ್ದು ಅದನ್ನು ಈಗಾಗಲೇ ನಿಪಿ.3 ಎಂದು ಗುರುತಿಸಲಾಗಿದೆ, ಸಾಕ್ಷಿಯ ಸಹಿಯನ್ನು ನಿಪಿ.3 (ಬಿ) ಎಂದು ಗುರುತಿಸಲಾಯಿತು. ಪ್ರಥಮ ವರ್ತಮಾನ ವರದಿಯನ್ನು ಈಗ ನೋಡುತ್ತಿದ್ದು ಅದನ್ನು ನಿಪಿ.6 ಮತ್ತು ಸಾಕ್ಷಿಯ ಸಹಿಯನ್ನು

ನಿಪಿ.6 (ಎ) ಎಂದು ಗುರುತಿಸಲಾಯಿತು. ಮುದ್ದೆ ಮಾಲುಗಳನ್ನು ಠಾಣಾ ಮಾಲು ಪಟ್ಟಿ ಸಂಃ 20/2017 ರಲ್ಲಿ ಅಳವಡಿಸಿಕೊಂಡಿರುತ್ತೇನೆ. ಸದರಿ ಮುದ್ದೆ ಮಾಲುಗಳನ್ನು ಈಗ ನೋಡುತ್ತಿದ್ದು ಅವುಗಳನ್ನು ಈಗಾಗಲೇ ಎಂ.ಓ 01 ಮತ್ತು 2 ಎಂದು ಗುರುತಿಸಲಾಗಿದೆ.

**3.** ನಂತರ ಚಾಸಾ.2 ರಿಂದ 6 ರವರ ಹೇಳಿಕೆಗಳನ್ನು ಪಡೆದುಕೊಂಡಿರುತ್ತೇನೆ. ಆರೋಪಿಯನ್ನು ಠಾಣಾ ಸುರಕ್ಷಾ ಬಂಧನದಲ್ಲಿ ಇಟ್ಟಿದ್ದು ನಂತರ ದಿಃ 19.01.2017 ರಂದು ಆರೋಪಿಯ ವೈದ್ಯಕೀಯ ಪರೀಕ್ಷೆ ಮಾಡಿಸಿ ನ್ಯಾಯಾಲಯಕ್ಕೆ ಹಾಜರು ಪಡಿಸಿರುತ್ತೇನೆ. ಅಮಾನತ್ತು ಪಡಿಸಿದ ಮುದ್ದೆ ಮಾಲುಗಳನ್ನು ರಾಸಾಯನಿಕ ಪರೀಕ್ಷೆಗೆ ಕಳುಹಿಸಿಕೊಟ್ಟಿರುತ್ತೇನೆ. ನಂತರ 03.04.2017 ರಂದು ಎಫ್.ಎಸ್.ಎಲ್ ವರದಿಯನ್ನು ಕೇಸಿನ ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ. ಸದರಿ ಎಫ್.ಎಸ್.ಎಲ್ ವರದಿಯನ್ನು ಈಗ ನೋಡುತ್ತಿದ್ದು ಅದನ್ನು ನಿಪಿ.7 ಎಂದು ಸಾಕ್ಷಿಯ ಸಹಿಯನ್ನು ನಿಪಿ.7 (ಎ) ಎಂದು ಗುರುತಿಸಲಾಯಿತು. ನಂತರ ತನಿಖೆ ಪೂರ್ಗೊಂಡಿದ್ದರಿಂದ ಆರೋಪಿಯ ವಿರುದ್ಧ ದೋಷಾರೋಪಣಾ ಪಟ್ಟಿಯನ್ನು ಸಲ್ಲಿಸಿರುತ್ತೇನೆ. ಆರೋಪಿಯನ್ನು ನೋಡಿದರೆ ಗುರುತಿಸುತ್ತೇನೆ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ–**

**4.** ಚಾಸಾ.1 ರವರು ಗಣಕೀಕೃತ ವರದಿಯನ್ನು ಸಲ್ಲಿಸಿರುತ್ತಾರೆ. ಸದರಿ ವರದಿಯನ್ನು ಎಲ್ಲಿ ತಯಾರಿಸಿರುತ್ತಾರೆಂದು ನನಗೆ ಗೊತ್ತಿಲ್ಲ. ಚಾಸಾ.1 ರವರು ನನ್ನ ಮೇಲಾಧಿಕಾರಿ ಎಂದರೆ ಸರಿ. ನಮ್ಮ ಮೇಲಾಧಿಕಾರಿಗಳ ಆದೇಶವನ್ನು ನಾವು ಪಾಲಿಸಬೇಕು ಎಂದರೆ ಕೆಲವೊಮ್ಮೆ ಎಂದು ನುಡಿಯುತ್ತಾರೆ. ನಾನು ಈ ಪ್ರಕರಣದಲ್ಲಿ ತನಿಖೆ ಮಾಡಿಲ್ಲ ಎಂದರೆ ಸರಿಯಲ್ಲ. ಎ.ಎಸ್.ಐ ಹುದ್ದೆಗಿಂತ ಮೇಲ್ಪಟ್ಟ ಅಧಿಕಾರಿ ತನಿಖೆ ಮಾಡಬೇಕೆಂಬ ನಿಯಮವಿದೆ ಎಂದರೆ ಸರಿಯಲ್ಲ. ತನಿಖೆ ನಡೆಸಲು ನಾನು ಮೇಲಾಧಿಕಾರಿಗಳ ಅನುಮತಿ ಪಡೆದಿಲ್ಲ. ಎಫ್.ಎಸ್.ಎಲ್ ವರದಿಯನ್ನು ಈ ಪ್ರಕರಣದ ಸಲುವಾಗಿ ಸೃಷ್ಟಿಸಿಕೊಂಡಿದ್ದೇನೆಂದರೆ ಸರಿಯಲ್ಲ. ನಾನು ಸಾಕ್ಷಿದಾರರ ಹೇಳಿಕೆ ಪಡೆದಿಲ್ಲ ಎಂದರೆ ಸರಿಯಲ್ಲ. ರಾತ್ರಿ 11.00 ಗಂಟೆಯ ನಂತರ ನಾನು ಸಾಕ್ಷಿದಾರರ ಹೇಳಿಕೆ ಪಡೆದಿರುತ್ತೇನೆ. ಹೇಳಿಕೆ ಪಡೆಯಲು ಸಾಕ್ಷಿದಾರರಿಗೆ ನೋಟೀಸು ನೀಡಿಲ್ಲ.

ನಾನು ಯಾವುದೇ ತನಿಖೆ ಮಾಡದೇ ಇದ್ದರೂ ಮೇಲಾಧಿಕಾರಿಗಳ ಮಾತು ಕೇಳಿ ಚಾಸಾ.1 ರವರು ನೀಡಿದ ಸುಳ್ಳು ದೂರಿಗೆ ಪೂರಕವಾಗಿ ಸುಳ್ಳು ಅಂತಿಮ ವರದಿ ಸಲ್ಲಿಸಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆಂದರೆ ಸರಿಯಲ್ಲ. ನನಗೆ ಅಂತಿಮ ವರದಿ ಸಲ್ಲಿಸಲು ಅಧಿಕಾರ ಇರಲಿಲ್ಲ ಎಂದರೆ ಸರಿಯಲ್ಲ. ನಾನು ಅಧಿಕಾರ ದುರುಪಯೋಗ ಪಡಿಸಿ ಸುಳ್ಳು ಅಂತಿಮ ವರದಿ ಸಲ್ಲಿಸಿದ್ದೇನೆಂದರೆ ಸರಿಯಲ್ಲ.

**<u>ಮರು ವಿಚಾರಣೆಃ– ಇಲ್ಲ.</u>**

(ನನ್ನ ಉಕ್ತಲೇಖನದ ಮೂಲಕ ಸಾಕ್ಷಿಯ ಹೇಳಿಕೆಯನ್ನು ಬಹಿರಂಗ ನ್ಯಾಯಾಲಯದಲ್ಲಿ ಗಣಕ ಯಂತ್ರದಲ್ಲಿ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸ.ಇ.

ಪ್ರಧಾನ ಸಿ.ಜೆ. ಮತ್ತು ಜೆ.ಎಂಎಫ್.ಸಿ
ಮಳವಳ್ಳಿ